# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 867 (1122) |
| ಸದಸ್ಯರ ಹೆಸರು | ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23.02.2024 |

ವಿಷಯ: ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಕಾರ್ಯವೈಖರಿಯ ಬಗ್ಗೆ

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತದ ಕಾರ್ಯ ವೈಖರಿ ಕುರಿತು ಸಾರ್ವಜನಿಕ ಉದ್ಯಮಗಳ ಸದನ ಸಮಿತಿಯ ಆಕ್ಷೇಪ ವ್ಯಕ್ತ ಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ – ಕೆಆರ್‌ಐಡಿಎಲ್ ಸಂಸ್ಥೆಯ ಕಾರ್ಯವೈಖರಿಯ ಬಗ್ಗೆ ಮಹಾಲೇಖಪಾಲರು ತಪಾಸಣೆ ನಡೆಸಿ, ಸಂಸ್ಥೆಯ ವಿವಿಧ ಸ್ಥರದಲ್ಲಿ ಉಂಟಾಗಿರುವ ಲೋಪದೋಷಗಳ ಬಗ್ಗೆ ಪ್ರಸ್ತಾಪಿಸಿದ್ದು, ಸಂಸ್ಥೆಯು ಪ್ರತಿಯೊಂದು ಕ್ಷೇತ್ರದಲ್ಲೂ ಸುಧಾರಣಾ ಕ್ರಮಗಳನ್ನು ಕೈಗೊಳ್ಳಬೇಕಾದ ಅಗತ್ಯತೆ ಇದ್ದು, ಲೋಪದೋಷಗಳನ್ನು ಸರಿಪಡಿಸಲು ಹಾಗೂ ಸಂಸ್ಥೆಯನ್ನು ಬಲಪಡಿಸಲು ಕೆಲವು ನೀತಿ ನಿರ್ಧಾರಗಳನ್ನು (Policy Decisions) ಬದಲಾವಣೆ ಮಾಡಬೇಕಾದ ಅವಶ್ಯಕತೆ ಇದೆ ಎಂದು ಸದನ ಸಮಿತಿಯು ಶಿಫಾರಸ್ಸು ಮಾಡಿರುತ್ತದೆ. |
| ಆ | ಬಂದಿದ್ದಲ್ಲಿ, 4 ಜಿ ವಿನಾಯಿತಿಯ ಲಾಭ ಪಡೆದು ನಿಯಮಗಳನ್ನು ಗಾಳಿಗೆ ತೂರಿರುವ ಪ್ರಕರಣಗಳ ಸಂಖ್ಯೆ ಎಷ್ಟು;<br><br>(ಈ ಬಗ್ಗೆ ಕೈಗೊಂಡ ಕ್ರಮಗಳೇನು) | 4 ಜಿ ವಿನಾಯಿತಿಯಡಿಯಲ್ಲಿ ಎರಡು ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗಳನ್ನು ವಿವಿಧ ಇಲಾಖೆಗಳಿಂದ ಕಾಮಗಾರಿಗಳನ್ನು ಸಂಸ್ಥೆಗೆ ವಹಿಸಿದ್ದು, ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಗತ್ಯತೆಗಳು ಮತ್ತು ಅಂದಾಜಿನ ಆಧಾರದ ಮೇಲೆ ಪ್ರತಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ, ಕಾಮಗಾರಿಗಳನ್ನು ವಹಿಸುವ ಇಲಾಖೆಯ ಅಗತ್ಯತೆಯ ಅನುಸಾರ ಅಂದಾಜುಗಳನ್ನು ತಯಾರಿಸಿ ಸಲ್ಲಿಸಲಾಗಿರುತ್ತದೆ.<br><br>ಅದರಂತೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿಯ ಆದೇಶಗಳನ್ನು ಆಯವ್ಯಯದ ನಿಬಂಧನೆಗಳು, ಅಗತ್ಯತೆಯ ಆಧಾರದ ಮೇಲೆ ಹಾಗೂ ಅನುದಾನದ ಲಭ್ಯತೆಯ ಆಧಾರದ ಮೇಲೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ಆದೇಶಗಳನ್ನು ನೀಡಿರುತ್ತವೆ. ಆದ್ದರಿಂದ 4 ಜಿ ವಿನಾಯಿತಿಯಡಿ ಯಾವುದೇ ನಿಯಮಗಳನ್ನು ಗಾಳಿಗೆ ತೂರಿರುವ ಪ್ರಕರಣಗಳು ಇರುವುದಿಲ್ಲ. |
| ಇ | ರೂ. 2 ಕೋಟಿಗಿಂತ ಹೆಚ್ಚು ಮೌಲ್ಯದ ಕಾಮಗಾರಿಯನ್ನು ವಿಭಜಿಸಿರುವ ಪ್ರಕರಣಗಳು ಸಹ ಜರುಗಿದ್ದು ಈ ಕುರಿತು | ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ – ಕೆಆರ್‌ಐಡಿಎಲ್ ಸಂಸ್ಥೆಗೆ ಕಾಮಗಾರಿಗಳ ಕ್ರಿಯಾ ಯೋಜನೆಯ ಅನುಮೋದನೆ ಪಡೆದ ನಂತರವೇ ಅಂದಾಜು |

| | | |
|---|---|---|
| | ಸರ್ಕಾರದ ನಿಲುವೇನು? | ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅದರಂತೆ, ಅನುಮೋದಿತ ಅಂದಾಜು ಪಟ್ಟಿಗಳಂತೆ ಕಾಮಗಾರಿಗಳನ್ನು ಸಂಸ್ಥೆಯಿಂದ ನಿರ್ವಹಿಸಲಾಗಿದೆ ಹಾಗೂ ಕಾಮಗಾರಿಗಳನ್ನು ವಿಭಜಿಸಲು ಸಂಸ್ಥೆಗೆ ಯಾವುದೇ ಅಧಿಕಾರವಿರುವುದಿಲ್ಲ. ಮಂಜೂರಾತಿ ನೀಡಿದ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ. |

**ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/152ನೇ/ಅ/ಚುರಪ್ರ-867 (1122)2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಸಚಿವರು